Re. No. D. 221

# भारत का राजपत्र
# The Gazette of India
# ಭಾರತ ರಾಜ ಪತ್ರ

It contains the text of 10 Acts (Kannada

**( EXTRAORDINARY )**
( ವಿಶೇಷ ಸಂಚಿಕೆ )

| | |
|---|---|
| भाग IX | अनुभाग 1 |
| PART IX | SECTION 1 |
| ಭಾಗ IX | ವಿಭಾಗ 1 |

**प्राधिकार से प्रकाशित**
**Published by Authority**
**ಪ್ರಾಧಿಕಾರದ ಮೇರೆಗೆ ಪ್ರಕಟಿಸಲಾಗಿದೆ.**


| | | | |
|---|---|---|---|
| सं. १ | नई दिल्ली, सोमवार, नवंबर १६, २००९ | कार्तीक २५, १९३१ (शका) | खंड. ४१ |
| No. 1 | New Delhi, Monday, November 16, 2009 | Karthika 25, 1931 (Saka) | Vol. 41 |
| ಸಂ. ೧ | ನವ ದೆಹಲಿ, ಸೋಮವಾರ, ನವೆಂಬರ್ ೧೬, ೨೦೦೯ | ಕಾರ್ತೀಕ ೨೫, ೧೯೩೧ (ಶಕ) | ಸಂಪುಟ. ೪೧ |


**Ministry of Law and Justice**
(Legislative Department)
New Delhi, 16th November, 2009

**ಕಾನೂನು ಮತ್ತು ನ್ಯಾಯ ಮಂತ್ರಾಲಯ**
**(ವಿಧಾಯೀ ಇಲಾಖೆ)**
**ನವದೆಹಲಿ, 16ನೇ ನವೆಂಬರ್, 2009**

The Translation in Kannada of the following Acts, namely :- (1) The Petroleum Act, 1934 (2) The Election Commission (Conditions of Service of Election Commissioners and Transaction of Business) Act, 1991 (3) The National Commission for Backward Classes Act, 1993 (4) The Lotteries (Regulation) Act, 1998 (5) The Advocates' Welfare Fund Act, 2001 (6) The Indian Council of World Affairs Act, 2001 (7) The Delimitation Act, 2002 (8) The Cigarettes and Other Tobacco Products (Prohibition of Advertisement and Regulation of Trade and Commerce, Production, Supply and Distribution) Act, 2003 (9) The Protection of Women from Domestic Violence Act, 2005 (10) The Prohibition of Child Marriage Act, 2006 - are hereby published under the authority of the President and shall be deemed to be authoritative texts thereof in Kannada under clause (a) of section 2 of the Authoritative Texts (Central Laws) Act, 1973 (50 of 1973).

ಈ ಕೆಳಕಂಡ ಅಧಿನಿಯಮಗಳು, ಎಂದರೆ :- (1) ಪೆಟ್ರೋಲಿಯಂ ಅಧಿನಿಯಮ, 1934 (2) ಚುನಾವಣಾ ಆಯೋಗ (ಚುನಾವಣಾ ಆಯುಕ್ತರುಗಳ ಸೇವಾ ಷರತ್ತುಗಳು ಮತ್ತು ವ್ಯವಹಾರ ನಿರ್ವಹಣೆ) ಅಧಿನಿಯಮ, 1991 (3) ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1993 (4) ಲಾಟರಿಗಳ (ವಿನಿಯಮನ) ಅಧಿನಿಯಮ, 1998 (5) ನ್ಯಾಯವಾದಿಗಳ ಕಲ್ಯಾಣ ನಿಧಿ ಅಧಿನಿಯಮ, 2001 (6) ಜಾಗತಿಕ ವ್ಯವಹಾರಗಳ ಭಾರತೀಯ ಪರಿಷತ್ತು ಅಧಿನಿಯಮ, 2001 (7) ಸೀಮಾ ನಿರ್ಣಯ ಅಧಿನಿಯಮ, 2002 (8) ಸಿಗರೇಟುಗಳ ಮತ್ತು ಇತರ ತಂಬಾಕು ಉತ್ಪನ್ನಗಳ (ಜಾಹೀರಾತು ನಿಷೇಧ ಮತ್ತು ವ್ಯಾಪಾರ ಮತ್ತು ವಾಣಿಜ್ಯ, ಉತ್ಪಾದನೆ, ಸರಬರಾಜು ಮತ್ತು ವಿತರಣೆಯ ವಿನಿಯಮನ) ಅಧಿನಿಯಮ, 2003 (9) ಗೃಹ ಸಂಬಂಧೀ ಹಿಂಸೆಯಿಂದ ಮಹಿಳೆಯರ ರಕ್ಷಣೆ ಅಧಿನಿಯಮ, 2005 (10) ಬಾಲ್ಯ ವಿವಾಹ ನಿಷೇಧ ಅಧಿನಿಯಮ, 2006 – ಇವುಗಳ ಕನ್ನಡ ಭಾಷಾಂತರವನ್ನು ರಾಷ್ಟ್ರಪತಿಯವರ ಪ್ರಾಧಿಕಾರದ ಮೇರೆಗೆ ಪ್ರಕಟಿಸಲಾಗಿದೆ ಮತ್ತು ಅಧಿಕೃತ ಪಾಠಗಳ (ಕೇಂದ್ರ ಕಾನೂನುಗಳು) ಅಧಿನಿಯಮ, 1973 (1973ರ 50)ರ 2ನೇ ಪ್ರಕರಣದ (ಎ) ಖಂಡದ ಮೇರೆಗೆ ಇವುಗಳನ್ನು ಈ ಅಧಿನಿಯಮಗಳ ಅಧಿಕೃತ ಕನ್ನಡ ಪಾಠವೆಂದು ಭಾವಿಸತಕ್ಕದ್ದು.

# ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1993

## (1993ರ ಅಧಿನಿಯಮ ಸಂಖ್ಯೆ 27)

[2ನೇ ಏಪ್ರಿಲ್, 1993]

ಅನುಸೂಚಿತ ಜಾತಿಗಳನ್ನು ಮತ್ತು ಅನುಸೂಚಿತ ಬುಡಕಟ್ಟುಗಳನ್ನು ಹೊರತುಪಡಿಸಿ, ಹಿಂದುಳಿದ ವರ್ಗಗಳಿಗಾಗಿ ಒಂದು ರಾಷ್ಟ್ರೀಯ ಆಯೋಗವನ್ನು ರಚಿಸುವುದಕ್ಕೆ ಮತ್ತು ಅದಕ್ಕೆ ಸಂಬಂಧಿಸಿದ ಅಥವಾ ಅದಕ್ಕೆ ಆನುಷಂಗಿಕವಾದ ವಿಷಯಗಳಿಗಾಗಿ ಉಪಬಂಧಿಸುವ ಅಧಿನಿಯಮ.

ಭಾರತ ಗಣರಾಜ್ಯದ ನಲವತ್ನಾಲ್ಕನೆಯ ವರ್ಷದಲ್ಲಿ ಸಂಸತ್ತಿನಿಂದ ಈ ಕೆಳಕಂಡಂತೆ ಅಧಿನಿಯಮಿತವಾಗತಕ್ಕದ್ದು:-

## ಅಧ್ಯಾಯ – I

## ಪ್ರಾರಂಭಿಕ

**1. ಚಿಕ್ಕ ಹೆಸರು, ವ್ಯಾಪ್ತಿ ಮತ್ತು ಪ್ರಾರಂಭ.**– (1) ಈ ಅಧಿನಿಯಮವನ್ನು ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ ಅಧಿನಿಯಮ, 1993 ಎಂದು ಕರೆಯತಕ್ಕದ್ದು.

(2) ಇದು ಜಮ್ಮು ಮತ್ತು ಕಾಶ್ಮೀರ ರಾಜ್ಯವನ್ನು ಹೊರತುಪಡಿಸಿ ಇಡೀ ಭಾರತಕ್ಕೆ ವ್ಯಾಪ್ತವಾಗುತ್ತದೆ.

(3) ಇದು 1993ರ ಫೆಬ್ರವರಿ 1 ರಂದು ಜಾರಿಗೆ ಬಂದಿರುವುದಾಗಿ ಭಾವಿಸತಕ್ಕದ್ದು.

**2. ಪರಿಭಾಷೆಗಳು.**– ಈ ಅಧಿನಿಯಮದಲ್ಲಿ ಸಂದರ್ಭವು ಅನ್ಯಥಾ ಅಗತ್ಯಪಡಿಸಿದ ಹೊರತು,–

(ಎ) "ಹಿಂದುಳಿದ ವರ್ಗಗಳು" ಎಂದರೆ, ಅನುಸೂಚಿತ ಜಾತಿಗಳನ್ನು ಮತ್ತು ಅನುಸೂಚಿತ ಬುಡಕಟ್ಟುಗಳನ್ನು ಹೊರತುಪಡಿಸಿ, ಕೇಂದ್ರ ಸರ್ಕಾರವು ಪಟ್ಟಿಗಳಲ್ಲಿ ನಿರ್ದಿಷ್ಟಪಡಿಸಬಹುದಾದಂತಹ ಹಿಂದುಳಿದ ವರ್ಗಗಳ ನಾಗರಿಕರು;

(ಬಿ) "ಆಯೋಗ" ಎಂದರೆ 3ನೇ ಪ್ರಕರಣದ ಮೇರೆಗೆ ರಚಿತವಾದ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ;

(ಸಿ) "ಪಟ್ಟಿಗಳು" ಎಂದರೆ ಭಾರತ ಸರ್ಕಾರದ ಮತ್ತು ಭಾರತದ ರಾಜ್ಯ ಕ್ಷೇತ್ರದೊಳಗಿನ ಯಾವುದೇ ಸ್ಥಳೀಯ ಅಥವಾ ಇತರೆ ಪ್ರಾಧಿಕಾರದ ಅಧೀನದಲ್ಲಿನ ಅಥವಾ ಭಾರತ ಸರ್ಕಾರದ ನಿಯಂತ್ರಣದಲ್ಲಿನ ಸೇವೆಗಳಲ್ಲಿ ಹಿಂದುಳಿದ ವರ್ಗಗಳ ನಾಗರಿಕರಿಗೆ ಸಾಕಷ್ಟು ಪ್ರಾತಿನಿಧ್ಯ ದೊರೆತಿಲ್ಲವೆಂದು ಭಾರತ ಸರ್ಕಾರವು ಅಭಿಪ್ರಾಯಪಟ್ಟಲ್ಲಿ, ಹಿಂದುಳಿದ ವರ್ಗಗಳ ನಾಗರಿಕರಿಗೆ ನೇಮಕಾತಿಗಳಲ್ಲಿ ಅಥವಾ ಹುದ್ದೆಗಳಲ್ಲಿ ಮೀಸಲಾತಿಗೆ ಉಪಬಂಧವನ್ನು ಕಲ್ಪಿಸುವ ಉದ್ದೇಶಗಳಿಗಾಗಿ ಕಾಲಕಾಲಕ್ಕೆ ಭಾರತ ಸರ್ಕಾರವು ಸಿದ್ಧಪಡಿಸಿದ ಪಟ್ಟಿಗಳು ಎಂದು ಅರ್ಥ;

(ಡಿ) "ಸದಸ್ಯ" ಎಂದರೆ ಆಯೋಗದ ಸದಸ್ಯ ಎಂದು ಅರ್ಥ ಮತ್ತು ಅದು ಅಧ್ಯಕ್ಷನನ್ನು ಒಳಗೊಳ್ಳುತ್ತದೆ;

(ಇ) "ನಿಯಮಿಸಲಾದುದು" ಎಂದರೆ ಈ ಅಧಿನಿಯಮದ ಮೇರೆಗೆ ರಚಿಸಲಾದ ನಿಯಮಗಳ ಮೂಲಕ ನಿಯಮಿಸಲಾದುದು ಎಂದು ಅರ್ಥ.

## ಅಧ್ಯಾಯ –II

## ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ

**3. ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗದ ರಚನೆ.**– (1) ಕೇಂದ್ರ ಸರ್ಕಾರವು, ಈ ಅಧಿನಿಯಮದ ಮೇರೆಗೆ ತನಗೆ ಪ್ರದತ್ತವಾದ ಅಧಿಕಾರಗಳನ್ನು ಚಲಾಯಿಸಲು ಮತ್ತು ತನಗೆ ವಹಿಸಿದ ಕಾರ್ಯಗಳನ್ನು ನೆರವೇರಿಸಲು ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ ಎಂಬ ಹೆಸರಿನ ಒಂದು ನಿಕಾಯವನ್ನು ರಚಿಸತಕ್ಕದ್ದು.

(2) ಆಯೋಗವು, ಕೇಂದ್ರ ಸರ್ಕಾರವು ನಾಮನಿರ್ದೇಶಿಸಿದ ಈ ಕೆಳಕಂಡ ಸದಸ್ಯರನ್ನು ಒಳಗೊಂಡಿರತಕ್ಕದ್ದು,-

(ಎ) ಸರ್ವೋಚ್ಚ ನ್ಯಾಯಾಲಯದ ಅಥವಾ ಉಚ್ಚ ನ್ಯಾಯಾಲಯದ ನ್ಯಾಯಾಧೀಶನಾಗಿರುವವನು ಅಥವಾ ನ್ಯಾಯಾಧೀಶನಾಗಿದ್ದವನು – ಅಧ್ಯಕ್ಷ;

(ಬಿ) ಒಬ್ಬ ಸಮಾಜ ವಿಜ್ಞಾನಿ;

(ಸಿ) ಹಿಂದುಳಿದ ವರ್ಗಗಳಿಗೆ ಸಂಬಂಧಿಸಿದಂತಹ ವಿಷಯಗಳಲ್ಲಿ ವಿಶೇಷ ಜ್ಞಾನ ಹೊಂದಿರುವ ಇಬ್ಬರು ವ್ಯಕ್ತಿಗಳು; ಮತ್ತು

(ಡಿ) ಭಾರತ ಸರ್ಕಾರದ ಕಾರ್ಯದರ್ಶಿ ದರ್ಜೆಯ ಕೇಂದ್ರ ಸರ್ಕಾರದ ಅಧಿಕಾರಿಯಾಗಿರುವವನು ಅಥವಾ ಅಧಿಕಾರಿಯಾಗಿದ್ದವನು – ಸದಸ್ಯ-ಕಾರ್ಯದರ್ಶಿ.

4. **ಅಧ್ಯಕ್ಷ ಮತ್ತು ಸದಸ್ಯರ ಪದಾವಧಿ ಮತ್ತು ಸೇವಾ ಷರತ್ತುಗಳು.**– (1) ಪ್ರತಿಯೊಬ್ಬ ಸದಸ್ಯನು ತಾನು ಪದವನ್ನು ವಹಿಸಿಕೊಂಡ ದಿನಾಂಕದಿಂದ ಮೂರು ವರ್ಷಗಳ ಅವಧಿಯವರೆಗೆ ಪದಧಾರಣ ಮಾಡತಕ್ಕದ್ದು.

(2) ಸದಸ್ಯನು, ಯಾವುದೇ ಸಮಯದಲ್ಲಿ ತಾನು ರುಜು ಮಾಡಿ ಕೇಂದ್ರ ಸರ್ಕಾರಕ್ಕೆ ಸಂಬೋಧಿಸಿ ಪತ್ರ ಬರೆಯುವ ಮೂಲಕ, ಅಧ್ಯಕ್ಷನ ಅಥವಾ ಸಂದರ್ಭಾನುಸಾರ, ಸದಸ್ಯನ ಪದಕ್ಕೆ ರಾಜೀನಾಮೆ ಕೊಡಬಹುದು.

(3) ಯಾವನೇ ವ್ಯಕ್ತಿಯು,-

(ಎ) ಅವಿಮುಕ್ತ ದಿವಾಳಿಯಾಗಿದ್ದರೆ;

(ಬಿ) ಕೇಂದ್ರ ಸರ್ಕಾರದ ಅಭಿಪ್ರಾಯದಲ್ಲಿ ನೈತಿಕ ಅಧಃಪತನವನ್ನೊಳಗೊಂಡ ಅಪರಾಧಕ್ಕಾಗಿ ಅಪರಾಧಿಯೆಂದು ನಿರ್ಣೀತನಾಗಿದ್ದರೆ ಮತ್ತು ಕಾರಾವಾಸಕ್ಕೆ ಗುರಿಯಾಗಿದ್ದರೆ;

(ಸಿ) ಅಸ್ವಸ್ಥಚಿತ್ತನಾಗಿದ್ದರೆ ಮತ್ತು ಸಕ್ಷಮ ನ್ಯಾಯಾಲಯದಿಂದ ಹಾಗೆಂದು ಘೋಷಿತನಾಗಿದ್ದರೆ;

(ಡಿ) ಕಾರ್ಯನಿರ್ವಹಿಸಲು ನಿರಾಕರಿಸಿದರೆ ಅಥವಾ ಕಾರ್ಯ ನಿರ್ವಹಿಸಲು ಅಸಮರ್ಥನಾದರೆ;

(ಇ) ಗೈರು ಹಾಜರಿಯ ಬಗ್ಗೆ ಆಯೋಗದ ಅನುಮತಿ ಪಡೆಯದೆ ಆಯೋಗದ ನಿರಂತರ ಮೂರು ಸಭೆಗಳಿಗೆ ಗೈರು ಹಾಜರಾದರೆ; ಅಥವಾ

(ಎಫ್) ಅಧ್ಯಕ್ಷನು ಅಥವಾ ಸದಸ್ಯನು ತನ್ನ ಸ್ಥಾನವನ್ನು ಎಷ್ಟರಮಟ್ಟಿಗೆ ದುರುಪಯೋಗಪಡಿಸಿಕೊಂಡಿದ್ದಾನೆಂದರೆ, ಆ ವ್ಯಕ್ತಿಯನ್ನು ಆ ಸ್ಥಾನದಲ್ಲಿ ಮುಂದುವರೆಸುವುದು ಹಿಂದುಳಿದ ವರ್ಗಗಳ ಹಿತಾಸಕ್ತಿಗೆ ಅಥವಾ ಸಾರ್ವಜನಿಕ ಹಿತಾಸಕ್ತಿಗೆ ಬಾಧಕವಾಗುತ್ತದೆಂದು ಕೇಂದ್ರ ಸರ್ಕಾರವು ಅಭಿಪ್ರಾಯಪಟ್ಟರೆ

– ಆ ವ್ಯಕ್ತಿಯನ್ನು ಕೇಂದ್ರ ಸರ್ಕಾರವು ಸದಸ್ಯ ಪದದಿಂದ ತೆಗೆದುಹಾಕತಕ್ಕದ್ದು:

ಪರಂತು, ಈ ವಿಷಯದಲ್ಲಿ ಅಹವಾಲು ಹೇಳಿಕೊಳ್ಳುವುದಕ್ಕೆ ಯಾರೇ ವ್ಯಕ್ತಿಗೆ ಒಂದು ಅವಕಾಶವನ್ನು ಕೊಡುವವರೆಗೆ ಅವನನ್ನು ಈ ಖಂಡದ ಮೇರೆಗೆ ತೆಗೆದುಹಾಕತಕ್ಕದ್ದಲ್ಲ.

(4) (2)ನೇ ಉಪಪ್ರಕರಣದ ಮೇರೆಗೆ ಅಥವಾ ಬೇರೆ ರೀತಿಯಲ್ಲಿ ಉಂಟಾದ ಖಾಲಿ ಸ್ಥಾನವನ್ನು ಹೊಸದಾಗಿ ನಾಮನಿರ್ದೇಶನ ಮಾಡುವ ಮೂಲಕ ತುಂಬತಕ್ಕದ್ದು.

(5) ಅಧ್ಯಕ್ಷನಿಗೆ ಮತ್ತು ಸದಸ್ಯರಿಗೆ ಸಂದಾಯವಾಗಬೇಕಾದ ಸಂಬಳಗಳು ಮತ್ತು ಭತ್ಯೆಗಳು ಮತ್ತು ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**5. ಆಯೋಗದ ಅಧಿಕಾರಿಗಳು ಮತ್ತು ಇತರ ನೌಕರರು.**- (1) ಕೇಂದ್ರ ಸರ್ಕಾರವು, ಆಯೋಗದ ಕಾರ್ಯಗಳ ದಕ್ಷ ನಿರ್ವಹಣೆಗಾಗಿ ಅವಶ್ಯವೆನಿಸಬಹುದಾದಂತಹ ಅಧಿಕಾರಿಗಳನ್ನು ಮತ್ತು ನೌಕರರನ್ನು ಆಯೋಗಕ್ಕೆ ಒದಗಿಸತಕ್ಕದ್ದು.

(2) ಆಯೋಗದ ಉದ್ದೇಶಕ್ಕಾಗಿ ನೇಮಕಗೊಂಡ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯವಾಗಬೇಕಾದ ಸಂಬಳಗಳು ಮತ್ತು ಭತ್ಯಗಳು ಮತ್ತು ಅವರ ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು ನಿಯಮಿಸಬಹುದಾದಂತೆ ಇರತಕ್ಕದ್ದು.

**6. ಅನುದಾನಗಳಿಂದ ಸಂಬಳಗಳನ್ನು ಮತ್ತು ಭತ್ಯಗಳನ್ನು ಸಂದಾಯ ಮಾಡುವುದು.**- 5ನೇ ಪ್ರಕರಣದಲ್ಲಿ ಉಲ್ಲೇಖಿಸಿದ ಅಧಿಕಾರಿಗಳಿಗೆ ಮತ್ತು ಇತರ ನೌಕರರಿಗೆ ಸಂದಾಯವಾಗಬೇಕಾದ ಸಂಬಳಗಳು, ಭತ್ಯಗಳು ಮತ್ತು ನಿವೃತ್ತಿ ವೇತನಗಳೂ ಸೇರಿದಂತೆ, ಅಧ್ಯಕ್ಷನಿಗೆ ಮತ್ತು ಸದಸ್ಯರಿಗೆ ಸಂದಾಯವಾಗಬೇಕಾದ ಸಂಬಳಗಳನ್ನು ಮತ್ತು ಭತ್ಯಗಳನ್ನು ಮತ್ತು ಆಡಳಿತಾತ್ಮಕ ವೆಚ್ಚಗಳನ್ನು 12ನೇ ಪ್ರಕರಣದ (1)ನೇ ಉಪ ಪ್ರಕರಣದಲ್ಲಿ ಉಲ್ಲೇಖಿಸಿದ ಅನುದಾನಗಳಿಂದ ಸಂದಾಯ ಮಾಡತಕ್ಕದ್ದು.

**7. ಹುದ್ದೆಗಳು ಖಾಲಿ ಇರುವುದು, ಇತ್ಯಾದಿ ಆಯೋಗದ ವ್ಯವಹರಣೆಗಳನ್ನು ಅಸಿಂಧುಗೊಳಿಸುವುದಿಲ್ಲ.**- ಆಯೋಗದ ಯಾವುದೇ ಕಾರ್ಯವು ಅಥವಾ ವ್ಯವಹರಣೆಯು ಆಯೋಗದಲ್ಲಿನ ಯಾವುದೇ ಹುದ್ದೆಯು ಖಾಲಿ ಇರುವ ಅಥವಾ ಅದರ ರಚನೆಯಲ್ಲಿನ ಯಾವುದೇ ನ್ಯೂನತೆಯ ಕಾರಣ ಮಾತ್ರದಿಂದಲೇ ಅಸಿಂಧುವಾಗತಕ್ಕದ್ದಲ್ಲ.

**8. ಆಯೋಗವು ಕಾರ್ಯವಿಧಾನವನ್ನು ವಿನಿಯಮಿಸುವುದು.**- (1) ಅಧ್ಯಕ್ಷನು ಸೂಕ್ತವೆಂದು ಭಾವಿಸಬಹುದಾದಂಥ ಸಮಯದಲ್ಲಿ ಮತ್ತು ಸ್ಥಳದಲ್ಲಿ ಅವಶ್ಯವಾದಾಗಲೆಲ್ಲ ಆಯೋಗವು ಸಭೆ ಸೇರತಕ್ಕದ್ದು.

(2) ಆಯೋಗವು, ತನ್ನ ಕಾರ್ಯ ವಿಧಾನವನ್ನು ತಾನೇ ವಿನಿಯಮಿಸತಕ್ಕದ್ದು.

(3) ಆಯೋಗದ ಎಲ್ಲಾ ಆದೇಶಗಳನ್ನು ಮತ್ತು ತೀರ್ಮಾನಗಳನ್ನು ಆಯೋಗದ ಸದಸ್ಯ ಕಾರ್ಯದರ್ಶಿಯು ಅಥವಾ ಈ ಬಗ್ಗೆ ಸದಸ್ಯ ಕಾರ್ಯದರ್ಶಿಯು ಕ್ರಮಬದ್ಧವಾಗಿ ಅಧಿಕೃತಗೊಳಿಸಿದ ಯಾವನೇ ಇತರ ಅಧಿಕಾರಿಯು ಅಧಿಪ್ರಮಾಣೀಕರಿಸತಕ್ಕದ್ದು.

## ಅಧ್ಯಾಯ - III

## ಆಯೋಗದ ಪ್ರಕಾರ್ಯಗಳು ಮತ್ತು ಅಧಿಕಾರಗಳು

**9. ಆಯೋಗದ ಪ್ರಕಾರ್ಯಗಳು.**- (1) ಆಯೋಗವು, ನಾಗರಿಕರ ಯಾವುದೇ ವರ್ಗವನ್ನು ಪಟ್ಟಿಗಳಲ್ಲಿ ಹಿಂದುಳಿದ ವರ್ಗದವರನ್ನಾಗಿ ಸೇರಿಸುವಂತೆ ಸಲ್ಲಿಸಿದ ಕೋರಿಕೆಗಳನ್ನು ಪರೀಕ್ಷಿಸತಕ್ಕದ್ದು ಮತ್ತು ಅಂಥ ಪಟ್ಟಿಗಳಲ್ಲಿ ಹೆಚ್ಚಿಗೆ ಸೇರ್ಪಡೆಯಾಗಿರುವ ಅಥವಾ ಕಡಿಮೆ ಸೇರ್ಪಡೆಯಾಗಿರುವ ಯಾವುದೇ ಹಿಂದುಳಿದ ವರ್ಗಗಳ ಬಗ್ಗೆ ಸ್ವೀಕರಿಸಲಾದ ದೂರುಗಳನ್ನು ಆಲಿಸತಕ್ಕದ್ದು ಮತ್ತು ತಾನು ಸೂಕ್ತವೆಂದು ಭಾವಿಸುವಂಥ ಸಲಹೆಯನ್ನು ಕೇಂದ್ರ ಸರ್ಕಾರಕ್ಕೆ ನೀಡತಕ್ಕದ್ದು.

(2) ಆಯೋಗದ ಸಲಹೆಗೆ ಕೇಂದ್ರ ಸರ್ಕಾರವು ಸಾಮಾನ್ಯವಾಗಿ ಬದ್ಧವಾಗಿರತಕ್ಕದ್ದು.

**10. ಆಯೋಗದ ಅಧಿಕಾರಗಳು.**- ಆಯೋಗವು, 9ನೇ ಪ್ರಕರಣದ (1)ನೇ ಉಪಪ್ರಕರಣದ ಮೇರೆಗೆ ತನ್ನ ಪ್ರಕಾರ್ಯಗಳನ್ನು ನೆರವೇರಿಸುವಾಗ ಮತ್ತು ವಿಶೇಷವಾಗಿ, ಈ ಕೆಳಕಂಡ ವಿಷಯಗಳಿಗೆ ಎಂದರೆ:-

(ಎ) ಭಾರತದ ಯಾವುದೇ ಭಾಗದಿಂದ ಯಾರೇ ವ್ಯಕ್ತಿಯನ್ನು ಸಮನು ಮಾಡುವುದು ಮತ್ತು ಅವನ ಹಾಜರಾತಿಯನ್ನು ಒತ್ತಾಯಪಡಿಸುವುದು ಮತ್ತು ಪ್ರಮಾಣದ ಮೇಲೆ ಅವನನ್ನು ಪರೀಕ್ಷಿಸುವುದಕ್ಕೆ;

(ಬಿ) ಯಾವುದೇ ದಸ್ತಾವೇಜನ್ನು ಶೋಧಿಸುವಂತೆ ಮತ್ತು ಹಾಜರುಪಡಿಸುವಂತೆ ಅಗತ್ಯಪಡಿಸುವುದಕ್ಕೆ;

(ಸಿ) ಶಪಥ ಪತ್ರದ ಮೇಲೆ ಸಾಕ್ಷ್ಯವನ್ನು ಪಡೆಯುವುದಕ್ಕೆ;

(ಡಿ) ಯಾವುದೇ ನ್ಯಾಯಾಲಯ ಅಥವಾ ಕಚೇರಿಯಿಂದ ಯಾವುದೇ ಸಾರ್ವಜನಿಕ ದಾಖಲೆಯನ್ನು ಅಥವಾ ಅದರ ಪ್ರತಿಯನ್ನು ಕಡ್ಡಾಯವಾಗಿ ಕೋರುವುದಕ್ಕೆ;

(ಇ) ಸಾಕ್ಷಿದಾರರ ಮತ್ತು ದಾಖಲೆಗಳ ಪರೀಕ್ಷೆಗಾಗಿ ಕಮೀಷನನ್ನು ಹೊರಡಿಸುವುದಕ್ಕೆ; ಮತ್ತು

(ಎಫ್) ನಿಯಮಿಸಬಹುದಾದ ಯಾವುದೇ ಇತರ ವಿಷಯಕ್ಕೆ

– ಸಂಬಂಧಿಸಿದಂತೆ ದಾವೆಯ ಅಧಿವಿಚಾರಣೆ ನಡೆಸುವಲ್ಲಿ ಸಿವಿಲ್ ನ್ಯಾಯಾಲಯದ ಎಲ್ಲ ಅಧಿಕಾರಗಳನ್ನು ಹೊಂದಿರತಕ್ಕದ್ದು.

11. **ಕೇಂದ್ರ ಸರ್ಕಾರದಿಂದ ಪಟ್ಟಿಗಳ ನಿಯತಕಾಲಿಕ ಪರಿಷ್ಕರಣೆ.–** (1) ಕೇಂದ್ರ ಸರ್ಕಾರವು, ಯಾವುದೇ ಸಮಯದಲ್ಲಿ, ಮತ್ತು ಈ ಅಧಿನಿಯಮವು ಜಾರಿಗೆ ಬಂದು ಹತ್ತು ವರ್ಷಗಳು ಮುಕ್ತಾಯವಾದ ಮೇಲೆ ಮತ್ತು ಅನಂತರ ಮುಂದಿನ ಪ್ರತಿ ಹತ್ತು ವರ್ಷಗಳ ಮುಕ್ತಾಯದ ತರುವಾಯ, ಯಾವ ವರ್ಗಗಳು ಹಿಂದುಳಿದ ವರ್ಗಗಳಾಗಿರುವುದು ನಿಂತುಹೋಗಿರುವುವೋ ಆ ವರ್ಗಗಳನ್ನು ಅಂಥ ಪಟ್ಟಿಗಳಿಂದ ತೆಗೆದುಹಾಕುವ ಅಥವಾ ಹೊಸ ಹಿಂದುಳಿದ ವರ್ಗಗಳನ್ನು ಅಂಥ ಪಟ್ಟಿಗಳಲ್ಲಿ ಸೇರಿಸುವ ದೃಷ್ಟಿಯಿಂದ ಪಟ್ಟಿಗಳ ಪರಿಷ್ಕರಣೆಯನ್ನು ಕೈಗೊಳ್ಳತಕ್ಕದ್ದು.

(2) (1)ನೇ ಉಪಪ್ರಕರಣದಲ್ಲಿ ಉಲ್ಲೇಖಿಸಿದ ಯಾವುದೇ ಪರಿಷ್ಕರಣೆಯನ್ನು ಕೇಂದ್ರ ಸರ್ಕಾರವು ಕೈಕೊಳ್ಳುವಾಗ ಆಯೋಗದೊಂದಿಗೆ ಸಮಾಲೋಚಿಸತಕ್ಕದ್ದು.

## ಅಧ್ಯಾಯ –IV

## ಹಣಕಾಸು, ಲೆಕ್ಕಪತ್ರಗಳು ಮತ್ತು ಲೆಕ್ಕ ಪರಿಶೋಧನೆ

12. **ಕೇಂದ್ರ ಸರ್ಕಾರದಿಂದ ಅನುದಾನಗಳು.–** (1) ಕೇಂದ್ರ ಸರ್ಕಾರವು, ಈ ಬಗ್ಗೆ ಸಂಸತ್ತು ಕಾನೂನಿನ ಮೂಲಕ ಮಾಡಿದ ಸೂಕ್ತ ಧನವಿನಿಯೋಗದ ತರುವಾಯ, ಈ ಅಧಿನಿಯಮದ ಉದ್ದೇಶಗಳಿಗಾಗಿ ಬಳಸಿಕೊಳ್ಳುವುದಕ್ಕಾಗಿ ಕೇಂದ್ರ ಸರ್ಕಾರವು ಸೂಕ್ತವೆಂದು ಭಾವಿಸಬಹುದಾದಂಥ ಹಣದ ಮೊತ್ತವನ್ನು ಅನುದಾನಗಳ ರೂಪದಲ್ಲಿ ಆಯೋಗಕ್ಕೆ ಸಂದಾಯ ಮಾಡತಕ್ಕದ್ದು.

(2) ಆಯೋಗವು, ಈ ಅಧಿನಿಯಮದ ಮೇರೆಗಿನ ಪ್ರಕಾರ್ಯಗಳ ನೆರವೇರಿಕೆಗಾಗಿ ಅದು ಸೂಕ್ತವೆಂದು ಭಾವಿಸುವಂಥ ಮೊತ್ತಗಳನ್ನು ಖರ್ಚು ಮಾಡಬಹುದು ಮತ್ತು ಅಂಥ ಮೊತ್ತಗಳನ್ನು (1)ನೇ ಉಪ ಪ್ರಕರಣದಲ್ಲಿ ಉಲ್ಲೇಖಿಸಿದ ಅನುದಾನಗಳಿಂದ ಸಂದಾಯ ಮಾಡಲಾದ ವೆಚ್ಚವೆಂಬುದಾಗಿ ಪರಿಗಣಿಸತಕ್ಕದ್ದು.

13. **ಲೆಕ್ಕಪತ್ರಗಳು ಮತ್ತು ಲೆಕ್ಕಪರಿಶೋಧನೆ.–** (1) ಆಯೋಗವು ಸರಿಯಾದ ಲೆಕ್ಕಪತ್ರಗಳನ್ನು ಮತ್ತು ಇತರೆ ಸಂಬಂಧಪಟ್ಟ ದಾಖಲೆಗಳನ್ನು ಇಡತಕ್ಕದ್ದು ಮತ್ತು ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ಭಾರತದ ಲೆಕ್ಕನಿಯಂತ್ರಕ ಮತ್ತು ಮಹಾ ಲೆಕ್ಕಪರಿಶೋಧಕರೊಂದಿಗೆ ಸಮಾಲೋಚಿಸಿ ಕೇಂದ್ರ ಸರ್ಕಾರವು ನಿಯಮಿಸಬಹುದಾದಂಥ ನಮೂನೆಯಲ್ಲಿ ಸಿದ್ಧಪಡಿಸತಕ್ಕದ್ದು.

(2) ಆಯೋಗದ ಲೆಕ್ಕಪತ್ರಗಳನ್ನು ಭಾರತದ ಲೆಕ್ಕ ನಿಯಂತ್ರಕ ಮತ್ತು ಮಹಾಲೆಕ್ಕಪರಿಶೋಧಕನು ನಿರ್ದಿಷ್ಟಪಡಿಸಬಹುದಾದಂಥ ಅವಧಿಯ ಅಂತರಗಳಲ್ಲಿ ಅವನು ಲೆಕ್ಕಪರಿಶೋಧನೆ ಮಾಡತಕ್ಕದ್ದು ಮತ್ತು ಅಂಥ ಲೆಕ್ಕಪರಿಶೋಧನೆಯ ಸಂಬಂಧದಲ್ಲಿ ಮಾಡಿದ ಯಾವುದೇ ವೆಚ್ಚವನ್ನು ಆಯೋಗವು ಭಾರತದ ಲೆಕ್ಕನಿಯಂತ್ರಕ ಮತ್ತು ಆ ಮಹಾಲೆಕ್ಕಪರಿಶೋಧಕನಿಗೆ ಸಂದಾಯ ಮಾಡತಕ್ಕದ್ದು.

(3) ಭಾರತದ ಲೆಕ್ಕ ನಿಯಂತ್ರಕ ಮತ್ತು ಮಹಾಲೆಕ್ಕಪರಿಶೋಧಕನು ಮತ್ತು ಈ ಅಧಿನಿಯಮದ ಮೇರೆಗೆ ಆಯೋಗದ ಲೆಕ್ಕಪತ್ರಗಳ ಪರಿಶೋಧನೆಯ ಸಂಬಂಧದಲ್ಲಿ ಅವನು ನೇಮಕ ಮಾಡಿರುವ ಯಾರೇ ವ್ಯಕ್ತಿಯು, ಅಂಥ ಲೆಕ್ಕಪರಿಶೋಧನೆಯ ಸಂಬಂಧದಲ್ಲಿ ಸರ್ಕಾರಿ ಲೆಕ್ಕಪತ್ರಗಳ ಪರಿಶೋಧನೆಗೆ ಸಂಬಂಧಪಟ್ಟಂತೆ ಸಾಮಾನ್ಯವಾಗಿ ಲೆಕ್ಕ ನಿಯಂತ್ರಕ ಮತ್ತು ಮಹಾಲೆಕ್ಕಪರಿಶೋಧಕನು ಹೊಂದಿರುವಂಥವೇ ಹಕ್ಕುಗಳನ್ನು ಮತ್ತು ವಿಶೇಷಾಧಿಕಾರಗಳನ್ನು ಮತ್ತು ಅಧಿಕಾರಗಳನ್ನು ಹೊಂದಿರತಕ್ಕದ್ದು ಮತ್ತು ವಿಶೇಷವಾಗಿ, ಅವನು ಪುಸ್ತಕಗಳನ್ನು, ಲೆಕ್ಕಪತ್ರಗಳನ್ನು, ಸಂಬಂಧಪಟ್ಟ ವೋಚರುಗಳನ್ನು ಮತ್ತು ಇತರೆ ದಸ್ತಾವೇಜುಗಳನ್ನು ಮತ್ತು ಕಾಗದಪತ್ರಗಳನ್ನು ಹಾಜರುಪಡಿಸುವಂತೆ ಒತ್ತಾಯಿಸುವ ಮತ್ತು ಆಯೋಗದ ಯಾವುದೇ ಕಚೇರಿಯನ್ನು ಪರಿಶೀಲಿಸುವ ಹಕ್ಕನ್ನು ಹೊಂದಿರತಕ್ಕದ್ದು.

14. **ವಾರ್ಷಿಕ ವರದಿ.–** ಆಯೋಗವು, ಪ್ರತಿ ಆರ್ಥಿಕ ವರ್ಷಕ್ಕೆ ನಿಯಮಿಸಬಹುದಾದಂಥ ನಮೂನೆಯಲ್ಲಿ ಮತ್ತು ಅಂಥ ಕಾಲದಲ್ಲಿ, ಹಿಂದಿನ ಆರ್ಥಿಕ ವರ್ಷದ ಅವಧಿಯಲ್ಲಿನ ಅದರ ಕಾರ್ಯಚಟುವಟಿಕೆಗಳ ಪೂರ್ಣವಾದ ವಿವರಣೆಯನ್ನು ನೀಡುವ ವಾರ್ಷಿಕ ವರದಿಯನ್ನು ಸಿದ್ಧಪಡಿಸತಕ್ಕದ್ದು ಮತ್ತು ಅದರ ಪ್ರತಿಯನ್ನು ಕೇಂದ್ರ ಸರ್ಕಾರಕ್ಕೆ ಕಳುಹಿಸತಕ್ಕದ್ದು.

15. **ವಾರ್ಷಿಕ ವರದಿ ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸಂಸತ್ತಿನ ಮುಂದೆ ಇಡುವುದು.–** ಕೇಂದ್ರ ಸರ್ಕಾರವು, 9ನೇ ಪ್ರಕರಣದ ಮೇರೆಗೆ ಆಯೋಗವು ನೀಡಿದ ಸಲಹೆಯ ಬಗ್ಗೆ ಕೈಗೊಂಡ ಕ್ರಮದ ಜ್ಞಾಪನ ಪತ್ರ ಮತ್ತು ಯಾವುದೇ ಅಂಥ ಸಲಹೆಯನ್ನು ಒಪ್ಪದಿರುವುದಕ್ಕೆ, ಕಾರಣಗಳೇನಾದರೂ ಇದ್ದರೆ, ಆ ಕಾರಣಗಳ ಸಹಿತ ವಾರ್ಷಿಕ ವರದಿಯನ್ನು ಮತ್ತು ಲೆಕ್ಕಪರಿಶೋಧನಾ ವರದಿಯನ್ನು ಸ್ವೀಕರಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ ಅವುಗಳನ್ನು ಸಂಸತ್ತಿನ ಪ್ರತಿಯೊಂದು ಸದನದ ಮುಂದೆ ಇಡುವಂತೆ ಮಾಡತಕ್ಕದ್ದು.

## ಅಧ್ಯಾಯ – V

## ಸಂಕೀರ್ಣ

16. **ಆಯೋಗದ ಅಧ್ಯಕ್ಷ, ಸದಸ್ಯರು ಮತ್ತು ನೌಕರರು ಲೋಕ ನೌಕರರಾಗಿರುವುದು.–** ಆಯೋಗದ ಅಧ್ಯಕ್ಷ, ಸದಸ್ಯರು ಮತ್ತು ನೌಕರರನ್ನು ಭಾರತ ದಂಡ ಸಂಹಿತೆಯ (1860ರ 45) 21ನೇ ಪ್ರಕರಣದ ಅರ್ಥವ್ಯಾಪ್ತಿಯೊಳಗೆ ಲೋಕ ನೌಕರರೆಂಬುದಾಗಿ ಭಾವಿಸತಕ್ಕದ್ದು.

17. **ನಿಯಮಗಳನ್ನು ರಚಿಸಲು ಅಧಿಕಾರ.–** (1) ಕೇಂದ್ರ ಸರ್ಕಾರವು ಸರ್ಕಾರಿ ರಾಜಪತ್ರದಲ್ಲಿ ಅಧಿಸೂಚನೆಯ ಮೂಲಕ, ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವುದಕ್ಕಾಗಿ ನಿಯಮಗಳನ್ನು ರಚಿಸಬಹುದು.

(2) ವಿಶೇಷವಾಗಿ ಮತ್ತು ಹಿಂದೆ ಹೇಳಿದ ಅಧಿಕಾರಗಳ ಸಾಮಾನ್ಯ ಅನ್ವಯಕ್ಕೆ ಬಾಧಕವಾಗದಂತೆ, ಅಂಥ ನಿಯಮಗಳು ಈ ಮುಂದಿನ ಎಲ್ಲ ಅಥವಾ ಯಾವುದೇ ವಿಷಯದ ಬಗ್ಗೆ ಉಪಬಂಧಿಸಬಹುದು, ಎಂದರೆ:–

(ಎ) 4ನೇ ಪ್ರಕರಣದ (5)ನೇ ಉಪ ಪ್ರಕರಣದ ಮೇರೆಗೆ ಅಧ್ಯಕ್ಷನಿಗೆ ಮತ್ತು ಸದಸ್ಯರಿಗೆ ಮತ್ತು 5ನೇ ಪ್ರಕರಣದ (2)ನೇ ಉಪ ಪ್ರಕರಣದ ಮೇರೆಗೆ ಅಧಿಕಾರಿಗಳಿಗೆ ಮತ್ತು ಇತರೆ ನೌಕರರಿಗೆ ಸಂದಾಯವಾಗಬೇಕಾದ ಸಂಬಳಗಳು ಮತ್ತು ಭತ್ಯಗಳು ಮತ್ತು ಇತರ ಸೇವಾ ನಿಬಂಧನೆಗಳು ಮತ್ತು ಷರತ್ತುಗಳು;

(ಬಿ) 13ನೇ ಪ್ರಕರಣದ (1)ನೇ ಉಪ ಪ್ರಕರಣದ ಮೇರೆಗೆ ಯಾವ ನಮೂನೆಯಲ್ಲಿ ಲೆಕ್ಕಪತ್ರಗಳ ವಾರ್ಷಿಕ ವಿವರಣಾ ಪಟ್ಟಿಯನ್ನು ತಯಾರಿಸತಕ್ಕದ್ದೋ ಆ ನಮೂನೆ;

(ಸಿ) 14ನೇ ಪ್ರಕರಣದ ಮೇರೆಗೆ ಯಾವ ನಮೂನೆಯಲ್ಲಿ ಮತ್ತು ಸಮಯದಲ್ಲಿ ವಾರ್ಷಿಕ ವರದಿಯನ್ನು ತಯಾರಿಸತಕ್ಕದ್ದೋ ಆ ನಮೂನೆ ಮತ್ತು ಸಮಯ;

(ಡಿ) ನಿಯಮಿಸಬೇಕಾದ ಅಥವಾ ನಿಯಮಿಸಬಹುದಾದ ಯಾವುದೇ ಇತರ ವಿಷಯ.

(3) ಈ ಅಧಿನಿಯಮದ ಮೇರೆಗೆ ರಚಿಸಿದ ಪ್ರತಿಯೊಂದು ನಿಯಮವನ್ನು, ಅದನ್ನು ರಚಿಸಿದ ತರುವಾಯ ಸಾಧ್ಯವಾದಷ್ಟು ಬೇಗನೆ, ಸಂಸತ್ತಿನ ಪ್ರತಿಯೊಂದು ಸದನದ ಮುಂದೆ, ಅದು ಅಧಿವೇಶನದಲ್ಲಿರುವಾಗ, ಒಂದು ಅಧಿವೇಶನದಲ್ಲಿ ಅಥವಾ ಒಂದಾದ ಮೇಲೊಂದರಂತೆ ಅನುಕ್ರಮವಾಗಿ ಬರುವ ಎರಡು ಅಥವಾ ಹೆಚ್ಚು ಅಧಿವೇಶನಗಳಲ್ಲಿ ಅಡಕವಾಗಬಹುದಾದ ಒಟ್ಟು ಮೂವತ್ತು ದಿವಸಗಳ ಅವಧಿಯವರೆಗೆ ಇಡತಕ್ಕದ್ದು ಮತ್ತು ಮೇಲೆ ಹೇಳಿದ ಅಧಿವೇಶನ ಅಥವಾ ಒಂದಾದ ಮೇಲೊಂದರಂತೆ ಅನುಕ್ರಮವಾಗಿ ಬರುವ ಅಧಿವೇಶನಗಳ ನಿಕಟೋತ್ತರ ಅಧಿವೇಶನದ ಮುಕ್ತಾಯಕ್ಕೆ ಮುಂಚೆ, ಆ ನಿಯಮದಲ್ಲಿ ಯಾವುದೇ ಮಾರ್ಪಾಟನ್ನು ಮಾಡಬೇಕೆಂದು ಎರಡೂ ಸದನಗಳು ಒಪ್ಪಿದರೆ ಅಥವಾ ಆ ನಿಯಮವನ್ನು ರಚಿಸಕೂಡದೆಂದು ಎರಡೂ ಸದನಗಳೂ ಒಪ್ಪಿದರೆ, ಆ ನಿಯಮವು, ಆ ತರುವಾಯ ಸಂದರ್ಭಾನುಸಾರ ಹಾಗೆ ಮಾರ್ಪಾಟಾದ ರೂಪದಲ್ಲಿ ಮಾತ್ರ ಪರಿಣಾಮಕಾರಿಯಾಗತಕ್ಕದ್ದು ಅಥವಾ ಪರಿಣಾಮಕಾರಿಯಾಗತಕ್ಕದ್ದಲ್ಲ; ಆದಾಗ್ಯೂ, ಅಂಥ ಯಾವುದೇ ಮಾರ್ಪಾಟು ಅಥವಾ ರದ್ದಿಯಾತಿಯು ಆ ನಿಯಮದ ಮೇರೆಗೆ ಈ ಹಿಂದೆ ಮಾಡಿದ ಯಾವುದೇ ಕಾರ್ಯದ ಸಿಂಧುತ್ವಕ್ಕೆ ಬಾಧಕವನ್ನುಂಟು ಮಾಡತಕ್ಕದ್ದಲ್ಲ.

**18. ತೊಂದರೆಗಳ ನಿವಾರಣೆಗೆ ಅಧಿಕಾರ.–** (1) ಈ ಅಧಿನಿಯಮದ ಉಪಬಂಧಗಳನ್ನು ಕಾರ್ಯಗತಗೊಳಿಸುವಲ್ಲಿ ಯಾವುದೇ ತೊಂದರೆ ಉದ್ಭವಿಸಿದಲ್ಲಿ, ಕೇಂದ್ರ ಸರ್ಕಾರವು, ರಾಜಪತ್ರದಲ್ಲಿ ಆದೇಶ ಪ್ರಕಟಿಸುವ ಮೂಲಕ, ತೊಂದರೆಯನ್ನು ನಿವಾರಿಸಲು ಅವಶ್ಯ ಅಥವಾ ವಿಹಿತವೆಂದು ಅದಕ್ಕೆ ಕಂಡುಬರುವಂಥ, ಈ ಅಧಿನಿಯಮದ ಉಪಬಂಧಗಳಿಗೆ ಅಸಂಗತವಾಗದಂಥ ಉಪಬಂಧಗಳನ್ನು ಮಾಡಬಹುದು:

ಪರಂತು, ಈ ಅಧಿನಿಯಮವು ಪ್ರಾರಂಭವಾದ ದಿನಾಂಕದಿಂದ ಎರಡು ವರ್ಷಗಳ ಅವಧಿಯು ಮುಗಿದ ತರುವಾಯ ಯಾವುದೇ ಅಂಥ ಆದೇಶವನ್ನು ಮಾಡತಕ್ಕದ್ದಲ್ಲ.

(2) ಈ ಪ್ರಕರಣದ ಮೇರೆಗೆ ಮಾಡಿದ ಪ್ರತಿಯೊಂದು ಆದೇಶವನ್ನು, ಅದನ್ನು ಮಾಡಿದ ತರುವಾಯ ಸಾಧ್ಯವಾದಷ್ಟು ಬೇಗನೆ ಸಂಸತ್ತಿನ ಪ್ರತಿಯೊಂದು ಸದನಗಳ ಮುಂದೆ ಇಡತಕ್ಕದ್ದು.

**19. ನಿರಸನ ಮತ್ತು ಉಳಿಸುವಿಕೆ.–** (1) ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ ಅಧ್ಯಾದೇಶ, 1993 (1993ರ 23) ನ್ನು ಈ ಮೂಲಕ ನಿರಸನಗೊಳಿಸಲಾಗಿದೆ.

(2) ಹಾಗೆ ನಿರಸಿತವಾಗಿದ್ದರೂ, ಸದರಿ ಅಧ್ಯಾದೇಶದ ಮೇರೆಗೆ ಮಾಡಿದ ಯಾವುದೇ ಕಾರ್ಯವನ್ನು ಅಥವಾ ಕೈಗೊಂಡ ಯಾವುದೇ ಕ್ರಮವನ್ನು, ಈ ಅಧಿನಿಯಮದ ಸಂವಾದಿ ಉಪಬಂಧಗಳ ಮೇರೆಗೆ ಮಾಡಲಾಗಿದೆಯೆಂದು ಅಥವಾ ಕೈಗೊಳ್ಳಲಾಗಿದೆಯೆಂದು ಭಾವಿಸತಕ್ಕದ್ದು.

* * * * *